ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆಗೆ ಹಾಗೂ ಮೀನು ಉತ್ಪನ್ನಗಳಿಗೆ ಉತ್ತೇಜನ ನೀಡುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

297 (368) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ ಅನುಕೂಲಕರ ವಾತಾವರಣ ಹಾಗೂ ಅವಕಾಶವಿದ್ದರೂ ಆ ಭಾಗದಲ್ಲಿ ಮೀನುಗಾರಿಕೆಗೆ ಸರ್ಕಾರ ಉತ್ತೇಜನ ನೀಡದಿರಲು ಕಾರಣಗಳೇನು ;

(ಆ) ರಾಜ್ಯದಲ್ಲಿ ಮೀನುಗಾರಿಕಾ ಇಲಾಖೆಯಿಂದ ನಡೆಸಲಾಗುತ್ತಿರುವ (ಏಈಆಅ) ಕ್ಯಾಂಟೀನುಗಳ ಸಂಖ್ಯೆ ಎಷ್ಟು ;

(ಇ) ಉತ್ತರ ಕರ್ನಾಟಕ ಭಾಗದಲ್ಲಿ ಮೀನು ಉಪಯೋಗಿಸುವ ಗ್ರಾಹಕರ ಪ್ರಮಾಣ ಸಾಕಷ್ಟಿದ್ದರೂ ಇಲಾಖೆಯ ವತಿಯಿಂದ ನಡೆಸಲ್ಪಡುವ ಕ್ಯಾಂಟೀನುಗಳನ್ನು ಈ ಭಾಗದಲ್ಲಿ ಆರಂಭಿಸದಿರಲು ಕಾರಣವೇನು;

(ಈ) ಮುಂಬರುವ ದಿನಗಳಲ್ಲಿ ಈ ಕೊರತೆ ನೀಗಿಸಲು ಹಾಗೂ ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?